ಈ) ಹಾಗಿದ್ದಲ್ಲಿ, ಕಟ್ಟಡ ನಿರ್ಮಿಸದೇ ಪೂರ್ತಿ ಹಣ ಡ್ರಾ ಮಾಡಿದ ಅಧಿಕಾರಿಗಳ ಮೇಲೆ ಸರ್ಕಾರ ಏನು ಕ್ರಮ ಕೈಗೊಂಡಿದೆ;

ಉ) ಉಳಿದ ಕಟ್ಟಡದ ಕೆಲಸವನ್ನು ಯಾವಾಗ ಪೂರ್ತಿಗೊಳಿಸಲಾಗುವುದು; ಪೂರ್ಣ ಮಾಹಿತಿ ನೀಡುವುದು?

ಶ್ರೀ ಡಿ. ಸುಧಾಕರ್ (ಸಮಾಜ ಕಲ್ಯಾಣ ಸಚಿವರು) :

ಅ) ಹೌದು

ಆ) ಹೌದು

ಇ) ಹೌದು

ಈ) ಐ.ಪಿ.ಸಿ. ಕಲಂ 406, 408, 409, ರೆ/ವಿ. 149 ರಡಿ ನೀಡಿದ ದೂರಿನ ಮೇರೆಗೆ ಪ್ರಕರಣವನ್ನು ದಾಖಲಿಸಿಕೊಂಡು ಆರೋಪಿಯನ್ನು ಬಂಧಿಸಲಾಗಿದೆ. ಅಪೂರ್ಣಗೊಂಡಿರುವ ಕಟ್ಟಡ ಕಾಮಗಾರಿಗಳಲ್ಲಿ ಕೆಲವು ತಾಂತ್ರಿಕ ದೋಷಗಳಿರುತ್ತವೆ. ಆದಕಾರಣ ತಾಂತ್ರಿಕ ಸಲಹೆ ಪಡೆದು ಕಟ್ಟಡ ಕಾಮಗಾರಿಗಳನ್ನು ಶೀಘ್ರವಾಗಿ ಪೂರ್ಣಗೊಳಿಸಲು ಕ್ರಮವಹಿಸಲಾಗುತ್ತಿದೆ.

548 ಶ್ರೀ ರುದ್ರೇಶಗೌಡ ವೈ.ಎನ್. (ಬೇಲೂರು) : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಅಂಗವಿಕಲರು ಮಾಶಾಸನ ಪಡೆಯಲು ನಿಗದಿಪಡಿಸಿರುವ ಆದಾಯ ಮಿತಿ ರೂ.6000/- ಅಲ್ಲವೆ;

ಆ) ಸಂಧ್ಯಾ ಸುರಕ್ಷಾ ಯೋಜನೆಯಲ್ಲಿ ಫಲಾನುಭವಿಗಳಿಗೆ ನಿಗದಿಪಡಿಸಿರುವ ಆದಾಯಮಿತಿ ರೂ.20.000/- ಅಲ್ಲವೇ;

ಇ) ಹಾಗಿದ್ದ ಪಕ್ಷದಲ್ಲಿ ಅಂಗವಿಕಲರ ಮಾಶಾಸನಕ್ಕೆ ನಿಗದಿಪಡಿಸಿರುವ ಆದಾಯ ಮಿತಿಯನ್ನು ರೂ.6000/- ರಿಂದ ರೂ.20.000/-ಕ್ಕೆ ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಶ್ರೀ ಪಿ.ಎಂ. ನರೇಂದ್ರಸ್ವಾಮಿ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು) :

ಅ) ಹೌದು

ಆ) ಹೌದು

ಇ) ಅಂಗವಿಕಲರ ಮಾಶಾಸನ ಆದಾಯದ ಮಿತಿಯನ್ನು ಈ ಕೆಳಗಿನಂತೆ ನಿಗದಿಪಡಿಸುವ ಪ್ರಸ್ತಾವನೆಯನ್ನು ಪರಿಶೀಲಿಸಿ ತಿರಸ್ಕರಿಸಲಾಗಿದೆ.

1. ಶೇ.75ಕ್ಕಿಂತ ಹೆಚ್ಚಿನ ಅಂಗವಿಕಲತೆಯುಳ್ಳವರಿಗೆ ಮಾಸಾಶನವನ್ನು ಮಂಜೂರು ಮಾಡಲು ವಾರ್ಷಿಕ ವರಮಾನ ಮಿತಿಯನ್ನು ರೂ.20.000/–ಗಳಿಗೆ ನಿಗದಿಪಡಿಸುವುದು.

2. ಶೇ. 40 ರಿಂದ ಶೇ.75ರೊಳಗಿನ ಅಂಗವಿಕಲತೆಯುಳ್ಳವರಿಗೆ ಬಡತನ ರೇಖೆಗಿಂತ ಕೆಳಗಿನ ಕುಟುಂಬಗಳಿಗೆ ನಿಗದಿಪಡಿಸಿರುವ ಆದಾಯಮಿತಿ ಅಂದರೆ, ಗ್ರಾಮೀಣ ಪ್ರದೇಶದಲ್ಲಿ ರೂ.11.500/– ನಗರ ಪ್ರದೇಶದಲ್ಲಿ ರೂ.17.000/–ಗಳಿಗೆ ನಿಗದಿಪಡಿಸುವುದು.

522 ಶ್ರೀ ಶಿವಲಿಂಗೇಗೌಡ ಕೆ.ಎಂ. (ಅರಸೀಕೆರೆ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಆಂಬ್ಯುಲೆನ್ಸ್ ವ್ಯವಸ್ಥೆಯನ್ನು 108ರ ಯೋಜನೆಯಡಿಯಲ್ಲಿ ಖಾಸಗಿಯವರಿಗೆ ವಹಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಪ್ರತಿ ಕಿ.ಮೀ.ಗೆ ನಿಗದಿಪಡಿಸಿರುವ ದರವೆಷ್ಟು (ಮಾಹಿತಿ ನೀಡುವುದು)?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಸಾರ್ವಜನಿಕ ಹಾಗೂ ಖಾಸಗಿ ಸಹಭಾಗಿತ್ವದಲ್ಲಿ ಆಂಬ್ಯುಲೆನ್ಸ್ ಸೇವೆಯ ನಿರ್ವಹಣೆಯನ್ನು ಎಮರ್ಜೆನ್ಸಿ ಮ್ಯಾನೇಜ್‌ಮೆಂಟ್ ರಿಸರ್ಚ್ ಇನ್ಸ್‌ಟಿಟ್ಯೂಟ್, (EMRI) ಸಿಕಂದರಾಬಾದ್, ಸಂಸ್ಥೆಗೆ ವಹಿಸಲಾಗಿದೆ.

ಆ) ಒಪ್ಪಂದದ ಪ್ರಕಾರ ಕಿಲೋ ಮೀಟರ್ ಆಧಾರದ ಮೇಲೆ ಈ ಯೋಜನೆ ರೂಪಿಸಿಲ್ಲ.